**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.1241/2022**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ದ ಃಃ-

ಆರೋಪಿ ನಂ.1. ಭಾರತಮ್ಮ ಗಂಡ ಚಂದ್ರಪ್ಪಾ ಮಡಗು
ವಃ 40 ವರ್ಷ, ಉಃ ಮನೆ ಕೆಲಸ

2. ವೆಂಕಟೇಶ ತಂದೆ ಚಂದ್ರಪ್ಪಾ ಮಡಗು
ವಃ 25 ವರ್ಷ, ಉಃ ಗುತ್ತೆದಾರ ಕೆಲಸ

3 ಕಲ್ಪನಾ ಗಂಡ ನಾಗರಾಜ ಮಡಗು
ವಃ 30 ವರ್ಷ, ಉಃ ಮನೆ ಕೆಲಸ
ಎಲ್ಲರೂ ಸಾಃ ಈರನಾಪಲ್ಲಿ ಗ್ರಾಮ,
ತಾಃ ಸೇಡಂ

----

**ದೋಷಾರೋಪಣೆ**

ನಾನು ಶ್ರೀ ಬಾಬು , ಬಿ.ಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 23-04-2022ರಂದು ಬೆಳಿಗ್ಗೆ 11.00 ಗಂಟೆ ಸುಮಾರಿಗೆ ಸೇಡಂ ಪೋಲಿಸ ಠಾಣಾ ವ್ಯಾಪ್ತಿಯಲ್ಲಿ ಬರುವ ಸೇಡಂ ಪಟ್ಟಣದ ಸಾಯಿಬಾಬಾ ಕಾಲೋನಿಯಲ್ಲಿರುವ ಫಿರ್ಯಾದಿಯ ಬಾಡಿಗೆ ಮನೆಯಲ್ಲಿ ಆರೋಪಿ.1 ರಿಂದ 3 ರವರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಕೂಡಿ ಬಂದು, ಚಾಸಾ.1 ರವರ ಬಾಡಿಗೆ ಮನೆಯಲ್ಲಿ ಅತಿಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 448 ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಚಾಸಾ.1 ರವರ ಬಾಡಿಗೆ ಮನೆಯಲ್ಲಿ ಅತಿಕ್ರಮ ಪ್ರವೇಶ ಮಾಡಿ ಚಾಸಾ.1 ನೇದ್ದವಳು ಆರೋಪಿ .1 ರವರ ಗಂಡನ ಜೊತೆಯಲ್ಲಿ 2 ನೇ ಮದುವೆಯಾಗಿದ್ದಾಳೆ ವೈಮನಸ್ಸಿನಿಂದ ಮನೆಗೆ ನುಗ್ಗಿ ಮನೆಯಲ್ಲಿದ್ದ ಟಿ ವಿ, ಅಲಮೇರಾ ಗ್ಲಾಸ, ಒಂದು ಮೀಕ್ಸಿ ಹಾಗೂ ಒಂದು ಪ್ಲಾಸ್ಟಿಕ ಕುರ್ಚಿ ಹಾಗೂ ಇತರೆ ಮನೆ ಬಳಕೆಯ ವಸ್ತುಗಳನ್ನು ಒಡೆದು ಹಾಕಿ ಸುಮಾರು 25 ರಿಂದ 30 ಸಾವಿರ ರೂ. ಹಾನಿ ಮಾಡಿದ್ದು ಇರುತ್ತದೆ, ಆ ಮೂಲಕ ಭಾ.ದಂ.ಸಂ. ಕಲಂ 427 ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೂರನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಚಾಸಾ.1 ನೇದ್ದವಳಿಗೆ ರಂಡಿ ಬೋಸಡಿ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 504 ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ

ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಬಂದು, ಚಾಸಾ.1 ರವರಿಗೆ ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 506 ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 07-01-2026 ಪ್ರ.ದ.ನ್ಯಾ.ದಂ. ಸೇಡಂ.

**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.</u>**

**<u>ಸಿಸಿ ನಂ.1241/2022</u>**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ದ ಃಃ-

ಆರೋಪಿ ಃ ಭಾರತಮ್ಮ ಗಂಡ ಚಂದ್ರಪ್ಪಾ ಮಡಗು
ವಃ 40 ವರ್ಷ, ಉಃ ಮನೆ ಕೆಲಸ
ಸಾಃ ಈರನಾಪಲ್ಲಿ ಗ್ರಾಮ,
ತಾಃ ಸೇಡಂ ಹಾಗೂ ಇತರರು

**<u>ಆರೋಪಿತರ ಹೇಳಿಕೆ</u>**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ ಆ-1

ಆ-2

ಆ-3

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ ಆ-1

ಆ-2

ಆ-3

(ದೋಷಾರೋಪಣೆಯನ್ನು ಆರೋಪಿತನಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕಃ 07-01-2026 ಪ್ರ.ದ.ನ್ಯಾ.ದಂ. ಸೇಡಂ.